7. ಶಾಸನ ರಚನೆ

ಅ. ವಿಧೇಯಕವನ್ನು ಮಂಡಿಸುವುದು

1. ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2013

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಕೋಟಾ ಶ್ರೀನಿವಾಸ ಪೂಜಾರಿ [ಮುಜರಾಯಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಸಚಿವರು] :– ಮಾನ್ಯ ಅಧ್ಯಕ್ಷರೆ, 2013ನೇ ಸಾಲಿನ ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು :– ಪ್ರಸ್ತಾವ ಏನೆಂದರೆ,

'2013ನೇ ಸಾಲಿನ ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು'

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಕೋಟಾ ಶ್ರೀನಿವಾಸ ಪೂಜಾರಿ [ಮುಜರಾಯಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಸಚಿವರು] :– ಮಾನ್ಯ ಅಧ್ಯಕ್ಷರೆ, 2013ನೇ ಸಾಲಿನ ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು :– ವಿಧೇಯಕವನ್ನು ಮಂಡಿಸಲಾಗಿದೆ

ಆ)ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು